I/68131/2025

**ಕೊಡಗು ಜಿಲ್ಲಾ ಪಂಚಾಯತ್**

**ದೂರವಾಣಿ** : 08272- 228901
228908
228909

**ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಕಚೇರಿ, ವಿದ್ಯಾನಗರ, ಮಡಿಕೇರಿ, ಕೊಡಗು ಜಿಲ್ಲೆ-571201**
**e-Mail :-** ceokodagu@nic.in,
ceokodagu123@gmail.com

ಸಂಖ್ಯೆ:ಕೊಜಿಪಂ:ಅಭಿ-6:ಗ್ರಂಥಾಲಯ/ಪಂ.ನೇ:29:2023-24(E-31972) ದಿನಾಂಕ:24-01-2025

## ಅಧಿಸೂಚನೆ

ವಿಷಯ:- ಗ್ರಾಮ ಪಂಚಾಯಿತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ನೇಮಕಾತಿ ಕುರಿತು.

ಉಲ್ಲೇಖ:-
1) ಸರ್ಕಾರದ ಅಧಿಸೂಚನೆ ಸಂಖ್ಯೆ: RDPR/156/GPA/2022(ಇ) ದಿ:14.11.2022.
2) ದಿನಾಂಕ: 27.02.2024ರಂದು ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು, ಕೊಡಗು ಜಿಲ್ಲಾ ಪಂಚಾಯತ್, ಮಡಿಕೇರಿ ರವರ ಅಧ್ಯಕ್ಷತೆಯಲ್ಲಿ ಜರುಗಿದ ಗ್ರಾಮ ಪಂಚಾಯಿತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದ ಮೇಲ್ವಿಚಾರಕರ ಆಯ್ಕೆ ಸಮಿತಿ ಸಭೆಯ ನಡವಳಿ.
3) ಸರ್ಕಾರಿ ಆದೇಶ ಸಂಖ್ಯೆ: ಸಿಆಸು.ಇ01 ಸೆಹಿಮ 2022 ದಿನಾಂಕ:28.12.2022.
4) ಸರ್ಕಾರಿ ಆದೇಶ ಸಂಖ್ಯೆ: ಸಿಆಸು.ಇ 02 ಸೆಹಿಮ 2023 ದಿನಾಂಕ:08.03.2023.

***********

ವಿಷಯ ಮತ್ತು ಉಲ್ಲೇಖಿತ ಪತ್ರಕ್ಕೆ ಸಂಬಂಧಿಸಿದಂತೆ, ಉಲ್ಲೇಖ(1)ರ ಸರ್ಕಾರದ ಅಧಿಸೂಚನೆಯಲ್ಲಿ ಗ್ರಾಮ ಪಂಚಾಯಿತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ನೇಮಕಾತಿ ಕುರಿತು ತಿಳಿಸಲಾಗಿದೆ.

ಉಲ್ಲೇಖ(2)ರ ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಕೊಡಗುರವರ ಅಧ್ಯಕ್ಷತೆಯಲ್ಲಿ ದಿನಾಂಕ:27-02-2024 ರಂದು ಜರುಗಿದ ಗ್ರಾಮ ಪಂಚಾಯಿತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದ ಮೇಲ್ವಿಚಾರಕರ ಆಯ್ಕೆ ಸಮಿತಿ ಸಭೆಯಲ್ಲಿ ಕೊಡಗು ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಖಾಲಿ ಇರುವ 10 ಗ್ರಾಮ ಪಂಚಾಯಿತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಹುದ್ದೆಗಳನ್ನು ಉಲ್ಲೇಖ(3) ಮತ್ತು (4)ರಂತೆ ರೋಸ್ಟರ್ ಬಿಂದುವನ್ನು ಗುರುತಿಸಿ ಈ ಕೆಳಕಂಡಂತೆ ನೇಮಕಾತಿ ಮಾಡಲು ತೀರ್ಮಾನಿಸಲಾಗಿರುತ್ತದೆ. ಆಸಕ್ತ ಅಭ್ಯರ್ಥಿಗಳು ನಿಗದಿತ ಅರ್ಜಿ ನಮೂನೆಯನ್ನು ಕೊಡಗು ಜಿಲ್ಲೆಯ ವೆಬ್ ಸೈಟ್ ನಲ್ಲಿ https://kodagu.nic.in ಆನ್ ಲೈನ್ ಮೂಲಕ ಭರ್ತಿ ಮಾಡಿ ಅಗತ್ಯ ದೃಢೀಕರಿಸಿದ ದಾಖಲೆಗಳೊಂದಿಗೆ ಸಲ್ಲಿಸಬಹುದಾಗಿದೆ.

| ಅ. ನಂ. | ತಾಲೂಕು | ಗ್ರಾಮ ಪಂಚಾಯಿತಿ ಹೆಸರು | ಲಂಬ ಮೀಸಲಾತಿ | ಸಮತಳ ಮೀಸಲಾತಿ |
|---|---|---|---|---|
| 1 | ವಿರಾಜಪೇಟೆ | ಚೆಂಬೆಬೆಳ್ಳೂರು | ಪ.ಜಾ | ಸಾಮಾನ್ಯ |
| 2 | ವಿರಾಜಪೇಟೆ | ಚೆನ್ನಯ್ಯನಕೋಟೆ | ಸಾಮಾನ್ಯ | ಸಾಮಾನ್ಯ |
| 3 | ಪೊನ್ನಂಪೇಟೆ | ಬಾಳೆಲೆ | ಪ.ಪಂ. | ಸಾಮಾನ್ಯ |
| 4 | ಪೊನ್ನಂಪೇಟೆ | ಕುಟ್ಟ | ಸಾಮಾನ್ಯ | ಮಹಿಳಾ ಅಭ್ಯರ್ಥಿ |
| 5 | ಸೋಮವಾರಪೇಟೆ | ಶನಿವಾರಸಂತೆ | ಪ್ರವರ್ಗ-1 | ಸಾಮಾನ್ಯ |
| 6 | ಸೋಮವಾರಪೇಟೆ | ನಿಡ್ತ | ಸಾಮಾನ್ಯ | ಗ್ರಾ.ಅ |
| 7 | ಕುಶಾಲನಗರ | ಶಿರಂಗಾಲ | ಪ್ರವರ್ಗ-2(ಎ) | ಸಾಮಾನ್ಯ |
| 8 | ಪೊನ್ನಂಪೇಟೆ | ಗೋಣಿಕೊಪ್ಪ | ಸಾಮಾನ್ಯ | ಅಂ.ವಿ |
| 9 | ವಿರಾಜಪೇಟೆ | ಆರ್ಜಿ | ಪ.ಜಾ | ಮಹಿಳಾ ಅಭ್ಯರ್ಥಿ |
| 10 | ಪೊನ್ನಂಪೇಟೆ | ಕೆ.ಬಾಡಗ | ಸಾಮಾನ್ಯ | ಮಹಿಳಾ ಅಭ್ಯರ್ಥಿ |

1) **ಶೈಕ್ಷಣಿಕ ವಿದ್ಯಾರ್ಹತೆ:-**

- ದ್ವಿತೀಯ ಪದವಿ ಪೂರ್ವ ಪರೀಕ್ಷೆ (ಪಿ.ಯು.ಸಿ)ಯಲ್ಲಿ ಉತ್ತೀರ್ಣರಾಗಿರಬೇಕು ಮತ್ತು ಸರ್ಟಿಫಿಕೇಷನ್ ಕೋರ್ಸ್ ಇನ್ ಲೈಬ್ರರಿ ಸೈನ್ಸ್ ನಲ್ಲಿ ಪಮಾಣ ಪತ್ರ ಪಡೆದಿರತಕ್ಕದ್ದು ಹಾಗೂ ಕನಿಷ್ಠ ಮೂರು ತಿಂಗಳ ಮಾನ್ಯತೆ ಪಡೆದ ಸಂಸ್ಥೆಯಿಂದ ಕಂಪ್ಯೂಟರ್ ಕೋರ್ಸ್ ನಲ್ಲಿ ಉತ್ತೀರ್ಣರಾಗಿರಬೇಕು.
- ಒಂದು ವೇಳೆ ಸರ್ಟಿಫಿಕೇಷನ್ ಕೋರ್ಸ್ ಇನ್ ಲೈಬ್ರರಿ ಸೈನ್ಸ್ ನಲ್ಲಿ ಪದವಿ ಪಡೆದಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸದಿದ್ದಲ್ಲಿ ಪಿ.ಯು.ಸಿ ಪರೀಕ್ಷೆಯಲ್ಲಿ ಅಭ್ಯರ್ಥಿಯುಗಳಿಸಿದ ಅಂಕಗಳನ್ನು ಆಧರಿಸಿ ಅಧಿಸೂಚಿಸಿದ ಖಾಲಿ ಹುದ್ದೆಗಳಿಗೆ ಮೀಸಲಾತಿ ಬಿಂದುವಿನಂತೆ ಆಯ್ಕೆಗೆ ಪರಿಗಣಿಸಲಾಗುವುದು.
- ಈ ವಿದ್ಯಾರ್ಹತೆಯನ್ನು ಅಧಿಸೂಚನೆ ಹೊರಡಿಸುವ ದಿನಾಂಕಕ್ಕೆ ಮುಂಚಿತವಾಗಿ ಹೊಂದಿರಬೇಕು. ವಿದ್ಯಾರ್ಹತೆಯ ದಾಖಲಾತಿಗಳ ನೈಜತೆ ಬಗ್ಗೆ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ದೃಢೀಕರಿಸಿಕೊಂಡು ನಂತರ ನೇಮಕಾತಿ ಆದೇಶ ನೀಡಲಾಗುವುದು.
- ಒಂದು ವೇಳೆ ಇಬ್ಬರು ಅಥವಾ ಹಚ್ಚಿನ ಅಭ್ಯರ್ಥಿಗಳು ಸಮಾನವಾದ ಅಂಕಗಳನ್ನು ಮೆರಿಟ್ ಹೊಂದಿದ್ದು, ವಯಸ್ಸಿನ ಹಿರಿಯರಾದವರನ್ನು ಆಯ್ಕೆ ಮಾಡಲಾಗುವುದು. ಅದರಂತೆ ತಾತ್ಕಾಲಿಕ ಪಟ್ಟಿ ಪ್ರಕಟಿಸಲಾಗುವುದು.
- ಗ್ರಾಮ ಪಂಚಾಯತ್ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ತತ್ಸಮಾನ ವಿದ್ಯಾರ್ಹತೆ ಹೊಂದಿದ್ದಲ್ಲಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.

2) **ವಾಸಸ್ಥಳ:-**

ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಸಂಬಂಧಪಟ್ಟ ಗ್ರಾಮ ಪಂಚಾಯತ್ ವ್ಯಾಪ್ತಿಯ ನಿವಾಸಿಯಾಗಿರತಕ್ಕದು, ಪರಂತು ಸಂಬಂಧಪಟ್ಟ ಗ್ರಾಮ ಪಂಚಾಯತ್ ನಿವಾಸಿ ಲಭ್ಯತೆ ಇಲ್ಲದಿದ್ದಲ್ಲಿ ಆಯಾ ತಾಲ್ಲೂಕು ಪಂಚಾಯತಿಯ ವ್ಯಾಪ್ತಿಯಲ್ಲಿನ ಬೇರೆ ಗ್ರಾಮ ಪಂಚಾಯತ್ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸುವುದು. ಸಂಬಂಧಿಸಿದಂತೆ, ಸಕ್ಷಮ ಪ್ರಾಧಿಕಾರವಾದ ತಹಸೀಲ್ದಾರ್ ಇವರಿಂದ ವಾಸಸ್ಥಳ ಪ್ರಮಾಣ ಪತ್ರ ಪಡೆದು ಸಲ್ಲಿಸತಕ್ಕದ್ದು.

3) **ವಯೋಮಿತಿ:-**

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು ಹಾಗೂ ಗರಿಷ್ಠ ವಯೋಮಿತಿಯು ಈ ಕೆಳಕಂಡಂತೆ ಇರತಕ್ಕದ್ದು.

| | | |
|---|---|---|
| ಎ | ಸಾಮಾನ್ಯ ವರ್ಗ | 35 ವರ್ಷ |
| ಬಿ | 2ಎ, 2ಬಿ, 3ಎ, 3ಬಿ | 38 ವರ್ಷ |
| ಸಿ | ಪ.ಜಾ/ಪ.ಪಂ/ಪ್ರ-1 | 40 ವರ್ಷ |

ಮೇಲ್ಕಂಡ ಗರಿಷ್ಠ ವಯೋಮಿತಿ ಅಲ್ಲದೇ ವಿಧವೆಯರು / ಮಾಜಿ ಸೈನಿಕರು ಮುಂತಾದ ವರ್ಗದವರಿಗೆ ಸರ್ಕಾರವು ಕಾಲಕಾಲಕ್ಕೆ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ತಲುಪಿಸುವುದು ಅಭ್ಯರ್ಥಿಗಳ ಜನ್ಮ ದಿನಾಂಕವನ್ನು ಅವರ ಎಸ್.ಎನ್.ಎಲ್ .ಸಿ ಅಥವಾ ತತ್ಸಮಾನ ವಿದ್ಯಾರ್ಹತೆಯ ಪ್ರಮಾಣ ಪತ್ರ (ವರ್ಗಾವಣೆ ಪತ್ರ) ಕ್ಯುಮುಲೇಟಿವ್ ರೆಕಾರ್ಡ್‌ನಲ್ಲಿ ಪರಿಗಣಿಸಲಾಗುವುದು. ಇವುಗಳನ್ನು ಹೊರತುಪಡಿಸಿ ಇತರೆ ಯಾವುದೇ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ. (ಅಭ್ಯರ್ಥಿಯು ವಿಧವೆಯಾಗಿದ್ದಲ್ಲಿ 10 ವರ್ಷಗಳು (ಸಡಿಲಿಕೆ)

4) **ಅಂಗವಿಕಲ ಅಭ್ಯರ್ಥಿ:-**

ಅಂಗವಿಕಲ ಅಭ್ಯರ್ಥಿಗಳಿಗೆ 10 ವರ್ಷಗಳು (ಸಡಿಲಿಕೆ) ಸರ್ಕಾರ ಅಧಿಸೂಚನೆ ಸಂಖ್ಯೆ:ಡಿ.ಪಿ.ಎ.ಆರ್ 50 ಎಸ್.ಆರ್.ಆರ್. 2000 ದಿನಾಂಕ:03-09-2005 ಮತ್ತು ದಿನಾಂಕ:01-08-2009 ರಲ್ಲಿ ದೃಷ್ಟಿ ಮಾಂದ್ಯ ಶ್ರವಣ ದೋಷವುಳ್ಳ, ಚಲನ ವಲನ ವೈಕಲ್ಯ, ಕುಷ್ಠರೋಗದಿಂದ ಗುಣಮುಖರಾದ ಮತ್ತು ಬುದ್ಧಿ ಮಾಂದ್ಯತೆ / ಮಾನಸಿಕ ಅಸ್ವಸ್ಥತೆ (Low Vision Hearing impairment, locomotor disability, Leprosy cured, Mental retardation & Mental illness) ವೈಕಲ್ಯತೆಯೆಂದು ಪರಿಗಣಿಸಿದ್ದು, ಶೇ.40% ಕಡಿಮೆ ಇಲ್ಲದಂತೆ ಬಳಲುತ್ತಿರುವ ವ್ಯಕ್ತಿಗಳು. ಅಂಗವಿಕಲರಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ದಿನಾಂಕ:19.11.2005

ಸರ್ಕಾರದ ಅಧಿಕೃತ ಜ್ಞಾಪನಾ ಪತ್ರ ಸಂಖ್ಯೆ: ಸಿಆಸುಇ 15ಸೇನೆನಿ 2005ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದುಕೊಂಡಿರತಕ್ಕದು, ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು ಪರಿಗಣಿಸುವುದಿಲ್ಲ.

5) **<u>ಮಾಜಿ ಸೈನಿಕ:-</u>**

ಸೇವೆ ಸಲ್ಲಿಸಿರುವಷ್ಟು ವರ್ಷಗಳಿಗೆ 03 ವರ್ಷಗಳು ಸೇರಿಸಿದರೆ ಎಷ್ಟು ವರ್ಷಗಳಾಗುವವೋ ಅಷ್ಟು ವರ್ಷಗಳನ್ನು ವಯೋಮಿತಿಯಲ್ಲಿ ಹೆಚ್ಚಿಸಲಾಗುವುದು.

6) **<u>ಗ್ರಾಮೀಣ ಅಭ್ಯರ್ಥಿ:</u>**

ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ 1ರಿಂದ 10ನೇ ತರಗತಿವರೆಗೆ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಈ ಪ್ರಮಾಣ ಪತ್ರಗಳು ಅರ್ಜಿ ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಸಿಂಧುವಾಗಿರಬೇಕು ಮತ್ತು ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

1) ಗ್ರಾಮೀಣ ಮೀಸಲಾತಿಯನ್ನು ಕೋರುವ ಪರಿಶಿಷ್ಟ, ಜಾತಿ, ಪರಿಶಿಷ್ಠ ಪಂಗಡ, ಪ್ರವರ್ಗ-2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ನಮೂನೆ-2 ರಲ್ಲಿ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ಪಡಿದಿಟ್ಟುಕೊಂಡಿರತಕ್ಕದ್ದು.
2) ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ-2ರ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರದ ಜೊತೆಗೆ ನಮೂನೆ-1ರಲ್ಲಿ ಅವರು ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ಪ್ರಮಾಣ ಪತ್ರವನ್ನು ಸಂಬಂಧಿಸಿದ ತಹಶೀಲ್ದಾರ ರವರಿಂದ ಪಡೆದಿರತಕ್ಕದ್ದು.
3) ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-2ಎ, 2ಬಿ, 3ಎ, 3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಸಹ ಅನರ್ಹರಾಗುತ್ತಾರೆ.

**<u>ಸೂಚನೆ:</u>**

ಗ್ರಾಮೀಣ ಮೀಸಲಾತಿಗೆ ಸಂಬಂಧಿಸಿದಂತೆ ನಮೂನೆ -2 ಪ್ರಮಾಣ ಪತ್ರವನ್ನು ಅಭ್ಯರ್ಥಿಗಳು ತಾವು ವ್ಯಾಸಂಗ ಮಾಡಿದ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಅದಕ್ಕೆ ಸಂಬಂಧಿತ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಪಡೆದಿರತಕ್ಕದ್ದು.

7) **<u>ಕನ್ನಡ ಮಾಧ್ಯಮ ಅಭ್ಯರ್ಥಿ:-</u>**

ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಅದಕ್ಕೆ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಪಡೆಯತಕ್ಕದ್ದು.

8) **<u>ಜನ್ಮ ದಿನಾಂಕ:-</u>**

ಎಸ್.ಎಸ್.ಎಲ್.ಸಿ ಅಥವಾ ವರ್ಗಾವಣೆ ಪ್ರಮಾಣ ಪತ್ರ (ಟಿ.ಸಿ) ನಮೂದಿಸಿರುವ ಜನ್ಮ ದಿನಾಂಕವನ್ನು ಆಯ್ಕೆ ಪ್ರಾಧಿಕಾರವು ಪರಿಗಣಿಸುತ್ತದೆ. ಇತರೆ ಯಾವುದೇ ದಾಖಲೆಗಳನ್ನು ಪರಿಗಣಿಸುವುದಿಲ್ಲ.

9) **<u>ಅರ್ಜಿ ಸಲ್ಲಿಸುವ ವಿಧಾನ:-</u>**

ವೆಬ್ ವಿಳಾಸ: **https://www.kodagu.nic.in** (online ಮುಖಾಂತರ)

**10) ಅರ್ಜಿ ಶುಲ್ಕ:**

| | |
|---|---|
| ಸಾಮಾನ್ಯ ಅಭ್ಯರ್ಥಿಗಳಿಗೆ | ರೂ. 500 |
| ಪ್ರವರ್ಗ 2(ಎ), 2(ಬಿ), 3(ಎ), 3(ಬಿ)ಗೆ ಸೇರಿದ ಅಭ್ಯರ್ಥಿಗಳಿಗೆ | ರೂ. 300 |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಮಾಜಿ ಸೈನಿಕ ಅಭ್ಯರ್ಥಿಗಳಿಗೆ | ರೂ. 200 |
| ಎಲ್ಲಾ ವಿಧಗಳ ವಿಕಲಚೇತನ / ಅಂಗವಿಕಲ ಅಭ್ಯರ್ಥಿಗಳಿಗೆ | ರೂ. 100 |

**ಅರ್ಜಿ ಶುಲ್ಕ ಪಾವತಿಸುವ ವಿಧಾನ:-**

ಮೇಲ್ಕಂಡ ಕೆಟಗರಿಗೆ ಅನುಗುಣವಾಗಿ ನಿಗದಿಪಡಿಸಿದ ಅರ್ಜಿ ಶುಲ್ಕವನ್ನು ಈ ಕೆಳಗೆ ನೀಡಿರುವ QR Scan Code ಮೂಲಕ ಪಾವತಿಸಬಹುದಾಗಿದೆ.

GRAMA PANCHAYATH LIBRARY CESS ACCOUNT
QR919480869003-1020@unionbankofindia

BHIM | UPI

ಶುಲ್ಕ ಪಾವತಿಸಿದ ಬಗ್ಗೆ ಶುಲ್ಕ ಪಾವತಿ ಲಿಂಕ್ ನಲ್ಲಿ ಮುದ್ರಿಸಿ (Print Option ನಲ್ಲಿ) ಚಲನ್ ಪ್ರಿಂಟ್ ತೆಗೆದುಕೊಂಡು ಆನ್ ಲೈನ್ ನಲ್ಲಿ ಅರ್ಜಿ ಸಲ್ಲಿಸುವಾಗ ಕಡ್ಡಾಯವಾಗಿ ಅಪ್ಲೋಡ್ ಮಾಡುವುದು.

| ಕ್ರ.ಸಂ | ಖಾತೆ ಹೆಸರು | ಬ್ಯಾಂಕ್ ಹೆಸರು ಮತ್ತು ಬ್ರ್ಯಾಂಚ್ | ಬ್ಯಾಂಕ್ ಖಾತೆ ಸಂಖ್ಯೆ | IFSC Code |
|---|---|---|---|---|
| 1 | ಮುಖ್ಯ ಲೆಕ್ಕಾಧಿಕಾರಿ, ಕೊಡಗು ಜಿಲ್ಲಾ ಪಂಚಾಯತ್, ಮಡಿಕೇರಿ | ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ, ಮಡಿಕೇರಿ | **000722010001020** | **UBIN0900079** |

**11) ಜಾತಿ ಮೀಸಲಾತಿ ಪ್ರಮಾಣ ಪತ್ರ:-**

ನಿಗದಿತ ನಮೂನೆಯಲ್ಲಿ ಜಾತಿ ಪ್ರಮಾಣ ಪತ್ರವನ್ನು ತಹಸೀಲ್ದಾರ ರವರಿಂದ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದ ಒಳಗಾಗಿ ಪಡೆದಿರಬೇಕು.

- ಜಾತಿ ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು
- ಪ.ಜಾ/ಪ.ಪಂ ಅಭ್ಯರ್ಥಿಗಳು ನಮೂನೆ "ಡಿ" ರಲ್ಲಿ
- ಪ್ರವರ್ಗ-1ರ ಅಭ್ಯರ್ಥಿಗಳು ನಮೂನೆ "ಇ" ನಲ್ಲಿ, ಹಾಗೂ 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ನಮೂನೆ- "ಎಫ್" ನಲ್ಲಿ ಸಂಬಂಧಿತ ತಹಶೀಲ್ದಾರ ರವರಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು, ಈ ಪ್ರಮಾಣ ಪತ್ರವನ್ನು ಈ ಹುದ್ದೆಗೆ ಅರ್ಜಿ ಸಲ್ಲಿಸುವ ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರಬೇಕು.
- ಹಿಂದುಳಿದ ವರ್ಗಗಳಾದ ಪ್ರ-2ಎ, 2ಬಿ, 3ಎ, 3ಬಿ ವರ್ಗದ ಮೀಸಲಾತಿ ಪ್ರಮಾಣ ಪತ್ರಗಳನ್ನು ಅಭ್ಯರ್ಥಿಗಳು ಪಡೆದ ದಿನಾಂಕದಿಂದ ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ 05 ವರ್ಷಗಳ ಅವಧಿಯಲ್ಲಿರಬೇಕು. ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುತ್ತದೆ. ಮೀಸಲಾತಿ ಪ್ರಮಾಣ ಪತ್ರ ಜಾರಿ ಮಾಡಿದ್ದ ದಿನಾಂಕವನ್ನು ಅರ್ಜಿಯ ನಿಗದಿತ ಸ್ಥಳದಲ್ಲಿ ತಪ್ಪದೇ ನಮೂದಿಸಬೇಕು ಹಾಗೂ ಸಂದರ್ಶನ ಅರ್ಹರಾಗಿ ಹಾಜರಾದಾಗ ಅದರ ಮೂಲ ಪ್ರಮಾಣ ಪತ್ರವನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು.

I/68131/2025

**12) ಆಯ್ಕೆ ವಿಧಾನ:**

- ಶೈಕ್ಷಣಿಕ ಅರ್ಹತೆಯಲ್ಲಿನ ಮೆರಿಟ್ ಮತ್ತು ಮೀಸಲಾತಿ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು ಒಂದು ವೇಳೆ ಇಬ್ಬರು ಅಥವಾ ಹೆಚ್ಚಿನ ಅಭ್ಯರ್ಥಿಗಳು ಸಮಾನವಾದ ಅಂಕಗಳನ್ನು ಮೆರಿಟನ್ನು ಹೊಂದಿದಲ್ಲಿ ವಯಸ್ಸಿನಲ್ಲಿ ಹಿರಿಯರಾದವರನ್ನು ಆಯ್ಕೆಗೆ ಪರಿಗಣಿಸಲಾಗುವುದು.
- ಹುದ್ದೆಗೆ ಸಂಬಂಧಿಸಿದಂತೆ ಸರ್ಟಿಫಿಕೇಷನ್ ಕೋರ್ಸ್ ಇನ್ ಲೈಬ್ರರಿ ಸೈನ್ಸ್ ಪದವಿ ಪಡೆದಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸದಿದ್ದಲ್ಲಿ ಪಿಯುಸಿ ಪರೀಕ್ಷೆಯಲ್ಲಿ ಅಭ್ಯರ್ಥಿಯು ಗಳಿಸಿದ ಅಂಕಗಳನ್ನು ಆಧರಿಸಿ ಮೀಸಲಾತಿ ಬಿಂದುವಿನಂತೆ ಆಯ್ಕೆಗೆ ಪರಿಗಣಿಸಲಾಗುವುದು. ಒಂದು ವೇಳೆ ಇಬ್ಬರು ಅಥವಾ ಹೆಚ್ಚಿನ ಅಭ್ಯರ್ಥಿಗಳು ಸಮಾನವಾದ ಅಂಕಗಳನ್ನು / ಮೆರಿಟನ್ನು ಹೊಂದಿದಲ್ಲಿ ವಯಸ್ಸಿನಲ್ಲಿ ಹಿರಿಯರಾದವರನ್ನು ಆಯ್ಕೆಗೆ ಪರಿಗಣಿಸಲಾಗುವುದು,
- ಗ್ರಾಮ ಪಂಚಾಯತಿವಾರು ಬಂದಿರುವ ಅರ್ಜಿಗಳನ್ನು ಮೆರಿಟ್ ಆಧಾರದ ಮೇಲೆ ಖಾಲಿ ಹುದ್ದೆಗಳಿಗೆ (ರೋಸ್ಟರ್ ಬಿಂದುವಿನಂತೆ) ಸಮನಾಗಿ ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರುವಾರು ಆಯ್ಕೆ ಪಟ್ಟಿಯನ್ನು ತಯಾರಿಸಲಾಗುವುದು.

**13) ವೇತನ:-**

ಸರ್ಕಾರದ ಆದೇಶ ಸಂಖ್ಯೆ: **Notification No.KAE 106 LWA 2021 dated:28.07.2022** ರಂತೆ ಗ್ರಾಮ ಪಂಚಾಯತ್ ಗ್ರಂಥಾಲಯ ಮೇಲ್ವಿಚಾರಕರಿಗೆ ಪ್ರತಿ ಮಾಹೆ ಮಾಸಿಕ ಕನಿಷ್ಠ ವೇತನ **ರೂ.18606.12/-** ಹಾಗೂ ಕನಿಷ್ಠ ವೇತನ ಜೊತೆಗೆ ಕಾರ್ಮಿಕ ಇಲಾಖೆ ಕಾಲ ಕಾಲಕ್ಕೆ ನಿಗದಿಪಡಿಸುವ ವ್ಯತ್ಯಯವಾಗುವ ತುಟ್ಟಿ ಭತ್ಯೆಯನ್ನು (VDA) ಪಾವತಿಸಲಾಗುವುದು.

**ಸಾಮಾನ್ಯ ಸೂಚನೆಗಳು:-**

1) ಭಾರತೀಯ ನಾಗರೀಕನಾಗತಕ್ಕದ್ದು.
2) ಸರ್ಕಾರದ ಅಧಿಸೂಚನೆ ಸಂಖ್ಯೆ: RDPR/156/GPA/2022(ಇ) ದಿನಾಂಕ:14-11-2022ರ ಪ್ರಕಾರ ಅಧಿಸೂಚಿಸಿದ ಹುದ್ದೆಗಳ ನೇಮಕಾತಿಗೆ ವಿದ್ಯಾರ್ಹತೆಯನ್ನು ನಿಗದಿಪಡಿಸಲಾಗಿದೆ.
3) ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಆಯ್ಕೆ ಸಮಿತಿಯ ಅಧ್ಯಕ್ಷರಾಗಿದ್ದು, ಜಿಲ್ಲೆಯನ್ನು ರೋಸ್ಟರ್ ಬಿಂದುಗಾಗಿ ಒಂದು ಯುನಿಟ್ ಎಂದು ಪರಿಗಣಿಸಿ ಸರ್ಕಾರವು ಕಾಲ ಕಾಲಕ್ಕೆ ಹೊರಡಿಸುವ ಮಾರ್ಗಸೂಚಿಗನುಸಾರ ಕ್ರಮವಹಿಸುವ ಷರತ್ತುಗೊಳಪಟ್ಟಿರುತ್ತದೆ.
4) ತಾತ್ಕಾಲಿಕ ಪಟ್ಟಿಯನ್ನು ಪ್ರಕಟಿಸುವ ಮುನ್ನ ಮೆರಿಟ್ ಹಾಗೂ ಸಮತಳ ಮಿಸಲಾತಿ ಆಧಾರದ ಮೇಲೆ ಮೂಲ ದಾಖಲಾತಿ ಪರಿಶೀಲನೆ ಮಾಡಲಾಗುವುದು.
5) ಅಭ್ಯರ್ಥಿಯ ನೈಜತೆ ದೃಢಪಡದೇ ಇದ್ದಲ್ಲಿ ಅಂತಹ ಅಭ್ಯರ್ಥಿಗಳನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.
6) ಈ ಮೇಲ್ಕಂಡ ನೇಮಕಾತಿಯು ಸರ್ಕಾರದ ಅಧಿಸೂಚನೆ ಸಂಖ್ಯೆ:ಆರ್.ಡಿ.ಪಿ.ಆರ್/ 156/ಜಿ.ಪಿ.ಎ/2022

   (ಇ) ದಿನಾಂಕ:14-11-2022ರ ಷರತ್ತು ಮತ್ತು ನಿಬಂಧನೆಗೆ ಒಳಪಟ್ಟಿರುತ್ತದೆ. ಸದರಿ ಹುದ್ದೆಗಳ ಆಯ್ಕೆಯಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ / ಆಯ್ಕೆ ಸಮಿತಿಯ ನಿರ್ಣಯಗಳು ಅಂತಿಮವಾಗಿರುತ್ತದೆ.
7) ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಪಂಚಾಯಿತಿ / ತಾಲ್ಲೂಕು ಪಂಚಾಯಿತಿ / ಗ್ರಾಮ ಪಂಚಾಯಿತಿ ಸಂಪರ್ಕಿಸತಕ್ಕದ್ದು.
8) ಅಭ್ಯರ್ಥಿಯು ಆಧಾರ ಕಾರ್ಡ್ ಅಥವಾ ಓಟರ್ ಐಡಿ ಇನ್ನಿತರೇ ಗುರುತಿನ ಚೀಟಿಯನ್ನು ಲಗತ್ತಿಸಬೇಕು.
9) ಕಾನೂನು ಬಾಹಿರ / ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿದ್ದು ಕಂಡುಬಂದಿದ್ದಲ್ಲಿ ನೇಮಕಾತಿಗೆ ಅನರ್ಹರಾಗಿರುತ್ತಾರೆ.
10) ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆ ಪ್ರಾಧಿಕಾರದ ನಿರ್ಧಾರವೇ ಅಂತಿಮವಾಗಿರುತ್ತದೆ.
11) ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆ ಪಟ್ಟಿಯಲ್ಲಿ ಬಂದಿದೆ ಎಂಬುದರ ಆಧಾರದ ಮೇಲೆ ಅಭ್ಯರ್ಥಿಗೆ ನೇಮಕಾತಿಯ ಯಾವುದೇ ಹಕ್ಕು ದೊರೆಯುವುದಿಲ್ಲ.
12) ನೇಮಕಾತಿ ಪ್ರಕ್ರಿಯೆಯನ್ನು ಯಾವುದೇ ಸಂದರ್ಭದಲ್ಲಿ ಮುಂದೂಡುವ ರದ್ದುಗೊಳಿಸುವ ಮತ್ತು ನಿಬಂಧನೆಗಳನ್ನು ಬದಲಾಯಿಸುವ ಅಧಿಕಾರವನ್ನು ನೇಮಕಾತಿ ಪ್ರಾಧಿಕಾರ ಹೊಂದಿರುತ್ತದೆ.

I/68131/2025

13) **ಅರ್ಜಿ ಸಲ್ಲಿಸುವ ದಿನಾಂಕ**:-

| ಅರ್ಜಿಗಳನ್ನು ಪ್ರಾರಂಭ ಮಾಡುವ ದಿನಾಂಕ | ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ |
|---|---|
| **27-01-2025** | **13-02-2025** |

ಅರ್ಜಿಯಲ್ಲಿ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು.

| | |
|---|---|
| ಸಾ.ಅ | ಸಾಮಾನ್ಯ ಅರ್ಹತೆ |
| ಪ.ಜಾ | ಪರಿಶಿಷ್ಟ ಜಾತಿ |
| ಪ.ಪಂ | ಪರಿಶಿಷ್ಟ ಪಂಗಡ |
| ಪ್ರ-1 | ಪ್ರವರ್ಗ-1 |
| 2 ಎ | ಪ್ರವರ್ಗ-2 ಎ |
| 2 ಬಿ | ಪ್ರವರ್ಗ-2 ಬಿ |
| ಗ್ರಾ.ಅ | ಗ್ರಾಮೀಣ ಅಭ್ಯರ್ಥಿ |
| ಕ.ಮಾ.ಅ | ಕನ್ನಡ ಮಾಧ್ಯಮ ಅಭ್ಯರ್ಥಿ |
| ಅಂ.ವಿ | ಅಂಗವಿಕಲ |

Signed by
Aanand Prakash Meena
Date: 24-01-2025 12:55:10

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಹಾಗೂ ಅಧ್ಯಕ್ಷರು,
ಗ್ರಾ.ಪಂ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದ
ಮೇಲ್ವಿಚಾರಕರ ಆಯ್ಕೆ ಸಮಿತಿ
ಕೊಡಗು ಜಿಲ್ಲಾ ಪಂಚಾಯತ್, ಮಡಿಕೇರಿ.

**ಪ್ರತಿಯನ್ನು ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ:**

1) ಸರ್ಕಾರದ ಅವರ ಮುಖ್ಯ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2) ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕಲ್ಲುಕಟ್ಟಡ, ಕಾಳಿದಾಸ ರಸ್ತೆ, ಕೆ.ಜಿ. ರೋಡ್ ಜಂಕ್ಷನ್, ಗಾಂಧಿನಗರ, ಬೆಂಗಳೂರು.
3) ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು, ಕೊಡಗು ಜಿಲ್ಲಾ ಪಂಚಾಯತ್, ಮಡಿಕೇರಿ ರವರ ಅಪ್ತ ಶಾಖೆಗೆ.
4) ಉಪಕಾರ್ಯದರ್ಶಿ (ಆಡಳಿತ) ಕೊಡಗು ಜಿಲ್ಲಾ ಪಂಚಾಯತ್, ಮಡಿಕೇರಿ
5) ಜಿಲ್ಲಾ ಮಾಹಿತಿ ಅಧಿಕಾರಿ (NIC), ಕೊಡಗು ರವರಿಗೆ ಕಳುಹಿಸುತ್ತಾ ವೆಬ್ ಸೈಟ್ (**https://www.kodagu.nic.in**) ನಲ್ಲಿ ಪ್ರಕಟಿಸಲು ಸೂಕ್ತ ಕ್ರಮಕ್ಕಾಗಿ,
6) ಮುಖ್ಯ ಗ್ರಂಥಾಲಯಾಧಿಕಾರಿ, ಜಿಲ್ಲಾ ಕೇಂದ್ರ ಗ್ರಂಥಾಲಯ, ಕೊಡಗು ಇವರು ಗ್ರಂಥಾಲಯ ಮೇಲ್ವಿಚಾರಕರ ನೇಮಕಾತಿಗೆ ಸಂಬಂಧಿಸಿದಂತೆ ಅಗತ್ಯ ಕ್ರಮವಹಿಸುವುದು.
7) ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯಿತಿ, ಸೋಮವಾರಪೇಟೆ, ವಿರಾಜಪೇಟೆ ಮತ್ತು ಪೊನ್ನಂಪೇಟೆ ತಾಲ್ಲೂಕುರವರು ಈ ಬಗ್ಗೆ ತಾಲ್ಲೂಕು ಪಂಚಾಯಿತಿ/ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವ್ಯಾಪಕ ಪ್ರಚಾರವನ್ನು ನೀಡುವುದು.
8) ಜಿಲ್ಲೆಯ ಸಂಬಂಧಪಟ್ಟ ಗ್ರಾಮ ಪಂಚಾಯಿತಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖೇನ - ಸಂಬಂಧಪಟ್ಟ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಅಧಿಸೂಚನೆಯನ್ನು ಗ್ರಾಮ ಪಂಚಾಯತ್ ಸೂಚನಾ ಫಲಕದಲ್ಲಿ ಪ್ರಕಟಿಸುವುದು ಹಾಗೂ ಗ್ರಾಮ ಪಂಚಾಯತ್ ಚುನಾಯಿತ ಪ್ರತಿನಿಧಿಗಳ ಗಮನಕ್ಕೆ ತಂದು ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ವ್ಯಾಪಕ ಪ್ರಚಾರಪಡಿಸುವುದು.
9) ಕಛೇರಿ ಪ್ರತಿ.

**ಸಾಮಾನ್ಯ ಸೂಚನೆಗಳು :-**

- ಕನಿಷ್ಟ 3 ತಿಂಗಳ ತರಬೇತಿ ಹೊಂದಿದ ಬಗ್ಗೆ ಮಾನ್ಯತೆ ಪಡೆದ ಸಂಸ್ಥೆಯಿಂದ ಗಣಕಯಂತ್ರ ತರಬೇತಿ ಪ್ರಮಾಣ ಪತ್ರ ಸಲ್ಲಿಸುವುದು.
- ಕಾನೂನು ಬಾಹಿರ / ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿದ್ದು ಕಂಡು ಬಂದಿದ್ದಲ್ಲಿ ನೇಮಕಾತಿಗೆ ಅನರ್ಹರಾಗಿರುತ್ತಾರೆ.
- ಅರ್ಜಿಯಲ್ಲಿ ತಪ್ಪು / ಸುಳ್ಳು ಮಾಹಿತಿ ನೀಡಿ ಉದ್ಯೋಗ ಪಡೆಯುವ ಅಭ್ಯರ್ಥಿಗಳನ್ನು ಯಾವುದೇ ಸಮಯದಲ್ಲಾದರೂ ವಜಾ ಮಾಡಲಾಗುತ್ತದೆ ಹಾಗೂ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು.
- ಅರ್ಜಿಯಲ್ಲಿ ನೀಡುವ ವಿಳಾಸ, ಮೊಬೈಲ್ ಸಂಖ್ಯೆ ಮತ್ತು ಮಿಂಚಂಚೆಯೇ ಅಂತಿಮವಾಗಿದ್ದು, ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ / ಮೊಬೈಲ್ ಸಂಖ್ಯೆ / ಮಿಂಚಂಚೆಗೆ ಕಳುಹಿಸಿ ಕೊಡಲಾಗುವುದು. ನಂತರದಲ್ಲಿ ಯಾವುದೇ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.
- ಅಭ್ಯರ್ಥಿಗಳ ಅರ್ಹತೆಯ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ನಿರ್ಧಾರವೇ ಅಂತಿಮವಾಗಿರುತ್ತದೆ. ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆ ಪಟ್ಟಿಯಲ್ಲಿ ಬಂದಿದೆ ಎಂಬುದರ ಆಧಾರದ ಮೇಲೆ ಅಭ್ಯರ್ಥಿಗೆ ನೇಮಕಾತಿಯ ಯಾವುದೇ ಹಕ್ಕು ದೊರೆಯುವುದಿಲ್ಲ.
- ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರದ ನೌಕರಿ ಸೇವೆಯಲ್ಲಿ ಇರುವ ಅಭ್ಯರ್ಥಿಗಳು ತಮ್ಮ ಇಲಾಖೆಯ ಮುಖ್ಯಸ್ಥರ ನಿರಾಕ್ಷೇಪಣಾ ಪತ್ರವನ್ನು ಹೊಂದಿರತಕ್ಕದ್ದು.
- ನೇಮಕಾತಿ ಪ್ರಕ್ರಿಯೆಯನ್ನು ಯಾವುದೇ ಸಂದರ್ಭದಲ್ಲಿ ಮುಂದೂಡುವ, ರದ್ದುಗೊಳಿಸುವ ಮತ್ತು ನಿರ್ಬಂಧನೆಗಳನ್ನು ಬದಲಾಯಿಸುವ ಅಧಿಕಾರವನ್ನು ನೇಮಕಾತಿ ಪ್ರಾಧಿಕಾರ ಹೊಂದಿರುತ್ತದೆ.
- ಈಗಾಗಲೇ ಪುರುಷ ಮತ್ತು ಮಹಿಳಾ ವ್ಯಕ್ತಿಯು ಎರಡನೆಯ ಮದುವೆಯಾಗಿದ್ದರೆ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಪೂರ್ವಾನುಮತಿಯನ್ನು ಪಡೆಯದಿದ್ದರೆ ಅಂತಹ ನೇಮಕಾತಿಗೆ ಅರ್ಹರಾಗಿರುವುದಿಲ್ಲ.
- ಅರ್ಜಿಗಳನ್ನು ಆನ್‌ಲೈನ್ ಮೂಲಕ ಸಲ್ಲಿಸುವುದು. ಅಂಚೆ ಅಥವಾ ಮುದ್ದಾಂ ಸಲ್ಲಿಸಲು ಅವಕಾಶವಿರುವುದಿಲ್ಲ. ಕೊನೆಯ ದಿನಾಂಕ ಮುಗಿದ ನಂತರ ಸಲ್ಲಿಸುವ ಯಾವುದೇ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
- ಮೂಲ ದಾಖಲೆಗಳ ಪರಿಶೀಲನೆಗೆ ಅರ್ಹರಾಗುವ ಅಭ್ಯರ್ಥಿಗಳಿಗೆ ಅಂಚೆ ಹಾಗೂ ಇ-ಮೇಲ್/ ಎಸ್.ಎಂ.ಎಸ್. ಮೂಲಕ ಮಾಹಿತಿ ನೀಡಲಾಗುವುದು. ಕಡ್ಡಾಯವಾಗಿ ಅರ್ಜಿಯಲ್ಲಿ ನಮೂದಿಸಿದ ಎಲ್ಲಾ ಮೂಲ ದಾಖಲೆಗಳನ್ನು ಸಲ್ಲಿಸತಕ್ಕದ್ದು.
- ನಿಗದಿಪಡಿಸಿದ ದಿನಾಂಕದಂದು ದಾಖಲಾತಿಗಳ ಪರಿಶೀಲನೆಗೆ ಹಾಜರಾಗದೇ ಇರುವ ಅಭ್ಯರ್ಥಿಗಳು ಅನರ್ಹಗೊಳ್ಳುತ್ತಾರೆ ಹಾಗೂ ಅವರ ಹೆಸರನ್ನು ನೇಮಕಾತಿ ಪ್ರಕ್ರಿಯೆಯಿಂದ ಕೈಬಿಡಲಾಗುವುದು.
- ಅರ್ಜಿಯಲ್ಲಿ ಕೇಳಿರುವ ಪೂರ್ಣ ಮಾಹಿತಿಯನ್ನು ಭರ್ತಿ ಮಾಡಿಲ್ಲದೇ ಇರುವ ಅಭ್ಯರ್ಥಿಗಳ ಅರ್ಜಿಗಳನ್ನು ಯಾವುದೇ ಮುನ್ಸೂಚನೆ ನೀಡದೇ ತಿರಸ್ಕರಿಲಾಗುವುದು.
- ಅಭ್ಯರ್ಥಿಗಳಿಗೆ ಕನ್ನಡ ಭಾಷೆ ಒದಲು, ಬರೆಯಲು ಮತ್ತು ಅರ್ಥ ಮಾಡಿಕೊಳ್ಳುವ ಜ್ಞಾನದ ಅವಶ್ಯಕತೆ ಕಡ್ಡಾಯವಾಗಿರುತ್ತದೆ ಹಾಗೂ ಸರ್ಕಾರಿ ನಿಯಮಾನುಸಾರ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ ತೇರ್ಗಡೆಯಾಗುವುದು.

******